**All India Radio: Bangalore**
**National Bulletin In Kannada**
**14.12.2025  19.35 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**14.12.2025  19.35 p.m.**
**<><><><>**

ಮುಖ್ಯಾಂಶಗಳು

1. ಆಸ್ಟ್ರೇಲಿಯಾದಲ್ಲಿ ದುಷ್ಕರ್ಮಿಗಳಿಂದ ಗುಂಡಿನ ದಾಳಿ; ಮೃತಪಟ್ಟವರ ಕುಟುಂಬಸ್ಥರಿಗೆ ಪ್ರಧಾನಿ ಮೋದಿ ಸಂತಾಪ
2. ಪ್ರಧಾನಿ ನರೇಂದ್ರ ಮೋದಿಯವರು ನಾಳೆ ಜೋರ್ಡಾನ್ ಭೇಟಿ ; ಉನ್ನತ ಮಟ್ಟದ ರಾಜಕೀಯ ಒಪ್ಪಂದ ಸಾಧ್ಯತೆ
3. ಮತಗಳ್ಳತನ ಆರೋಪಿಸಿ ಕಾಂಗ್ರೆಸಿನಿಂದ ಪ್ರತಿಭಟನೆ; ಚುನಾವಣಾ ಆಯೋಗ ಹಾಗೂ ಕೇಂದ್ರ ಸರ್ಕಾರದ ವಿರುದ್ಧ ಘೋಷಣೆ
4. ಮೂರನೇ ಟಿ-೨೦ ಕ್ರಿಕೆಟ್ ಪಂದ್ಯ;ಭಾರತ ಮತ್ತು ದಕ್ಷಿಣ ಆಫ್ರಿಕಾ ಹಣಾಹಣಿ

<><><><>

ಆಸ್ಟ್ರೇಲಿಯಾದ ಸಿಡ್ನಿಯಲ್ಲಿ ಯಹೂದಿಯರು ಹನುಕ್ಕಾ ಹಬ್ಬದ ಮೊದಲ ದಿನವನ್ನು ಆಚರಿಸುತ್ತಿರುವ ಸಂದರ್ಭದಲ್ಲಿ ಬಂದೂಕುಧಾರಿಗಳು ಇಂದು ನಡೆಸಿದ ಗುಂಡಿನ ಚಕಮಕಿಯಲ್ಲಿ ಒಬ್ಬ ಬಂದೂಕುಧಾರಿ ಸೇರಿದಂತೆ ಹತ್ತು ಜನರು ಸಾವನ್ನಪ್ಪಿದ್ದು, ೧೨ ಜನರು ಗಾಯಗೊಂಡಿದ್ದಾರೆ. ನ್ಯೂ ಸೌತ್ ವೇಲ್ಸ್ ಪೊಲೀಸರು ಇಬ್ಬರು ವ್ಯಕ್ತಿಗಳನ್ನು ವಶಕ್ಕೆ ಪಡೆದಿದ್ದು, ಇಬ್ಬರು ಬಂದೂಕುಧಾರಿಗಳಲ್ಲಿ ಒಬ್ಬರು ಸಾವನ್ನಪ್ಪಿದ್ದಾರೆ ಎಂದು ಮಾಧ್ಯಮ ವರದಿ ಮಾಡಿವೆ. ಈ ಭೀಕರ ಭಯೋತ್ಪಾದಕ ದಾಳಿಯನ್ನು ಪ್ರಧಾನಿ ನರೇಂದ್ರ ಮೋದಿ ತೀವ್ರವಾಗಿ ಖಂಡಿಸಿದ್ದು, ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಅವರು, ಮೃತಪಟ್ಟವರ ಕುಟುಂಬಗಳಿಗೆ ಸಂತಾಪ ಸೂಚಿಸಿದ್ದಾರೆ. ಹಾಗೂ ಈ ದುಃಖದ ಸಮಯದಲ್ಲಿ ಭಾರತವು ಆಸ್ಟ್ರೇಲಿಯಾದ ಜನರೊಂದಿಗೆ ಒಗ್ಗಟ್ಟಿನಲ್ಲಿ ನಿಲ್ಲುತ್ತದೆ ಎಂದು ಅವರು ತಿಳಿಸಿದ್ದಾರೆ.

<><><><>

ಪ್ರಧಾನಿ ನರೇಂದ್ರ ಮೋದಿ ಅವರು ನಾಳೆಯಿಂದ ಮಂಗಳವಾರದವರೆಗೆ ಜೋರ್ಡಾನ್‌ಗೆ ಭೇಟಿ ನೀಡಲಿದ್ದಾರೆ. ಜೋರ್ಡಾನ್ ದೊರೆ ಎರಡನೇ ಅಬ್ದುಲ್ಲಾ ಬಿನ್ ಅಲ್ ಹುಸೇನ್ ಅವರ ಆಹ್ವಾನದ ಮೇರೆಗೆ ಈ ಭೇಟಿ ಕೈಗೊಳ್ಳಲಿದ್ದಾರೆ. ಎರಡೂ ದೇಶಗಳ ನಡುವಿನ ರಾಜತಾಂತ್ರಿಕ ಸಂಬಂಧಗಳ ಸ್ಥಾಪನೆಯ ೭೫ನೇ ವಾರ್ಷಿಕೋತ್ಸವ ನಿಮಿತ್ತ, ಪ್ರಧಾನಿ ನರೇಂದ್ರ ಮೋದಿ ಅವರು, ಜೋರ್ಡಾನ್‌ಗೆ ಭೇಟಿ ನೀಡುತ್ತಿದ್ದಾರೆ. ಈ ವೇಳೆ ಭಾರತ ಮತ್ತು ಜೋರ್ಡಾನ್ ನಡುವೆ ಉನ್ನತ ಮಟ್ಟದ ರಾಜಕೀಯ ಒಪ್ಪಂದ ಏರ್ಪಡುವ ಸಾಧ್ಯತೆಯಿದೆ. ಭಾರತ ಮತ್ತು ಜೋರ್ಡಾನ್ ಬಲವಾದ ಮತ್ತು ಸ್ಥಿರವಾಗಿ ವಿಸ್ತರಿಸುತ್ತಿರುವ ಆರ್ಥಿಕ ಸಂಬಂಧಗಳನ್ನು ಹಂಚಿಕೊಳ್ಳುತ್ತವೆ. ಭಾರತವು ಜೋರ್ಡಾನ್‌ನ ಮೂರನೇ ಅತಿದೊಡ್ಡ ವ್ಯಾಪಾರ ಪಾಲುದಾರನಾಗಿ ಹೊರಹೊಮ್ಮುತ್ತಿದೆ. ಎರಡೂ ದೇಶಗಳ ನಡುವಿನ ದ್ವಿಪಕ್ಷೀಯ ವ್ಯಾಪಾರವು ಸುಮಾರು ೨.೮ ಶತಕೋಟಿ ಅಮೆರಿಕನ್ ಡಾಲರ್‌ಗಳ ಮೌಲ್ಯದ್ದಾಗಿದೆ. ಜೋರ್ಡಾನ್ ಭಾರತಕ್ಕೆ ರಸಗೊಬ್ಬರಗಳ ಪ್ರಮುಖ ಪೂರೈಕೆದಾರ, ವಿಶೇಷವಾಗಿ ಫಾಸ್ಫೇಟ್‌ಗಳು ಮತ್ತು ಪೊಟ್ಯಾಶ್, ಇವು ಭಾರತದ ಕೃಷಿ ವಲಯಕ್ಕೆ ನಿರ್ಣಾಯಕವಾಗಿವೆ. ಈ ಸಹಕಾರದ ಪ್ರಮುಖ ಉದಾಹರಣೆಯೆಂದರೆ ಜೋರ್ಡಾನ್ ಇಂಡಿಯಾ ರಸಗೊಬ್ಬರ ಕಂಪನಿ, ಇದು ಭಾರತದ ಇಫ್ಕೊ ಮತ್ತು ಜೋರ್ಡಾನ್ ಫಾಸ್ಫೇಟ್ಸ್ ಗಣಿ ಕಂಪನಿಯ ನಡುವಿನ ೮೬೦ ಶತಕೋಟಿ ಅಮೆರಿಕನ್ ಡಾಲರ್ ಮೌಲ್ಯದ ಜಂಟಿ ಉದ್ಯಮವಾಗಿದೆ. ಭಾರತದ ಆಹಾರ ಭದ್ರತಾ ಚೌಕಟ್ಟನ್ನು ಬಲಪಡಿಸುವ ಮೂಲಕ ಭಾರತಕ್ಕೆ ಫಾಸ್ಪರಿಕ್ ಆಮ್ಲವನ್ನು ಉತ್ಪಾದಿಸಲು ಮತ್ತು ರಫ್ತು ಮಾಡಲು ಕಂಪನಿಯನ್ನು ಸ್ಥಾಪಿಸಲಾಯಿತು. ಇದರ ಜೊತೆಗೆ, ಸುಮಾರು ೫೦೦ ಶತಕೋಟಿ ಅಮೆರಿಕನ್ ಡಾಲರ್‌ಗಳ ಸಂಚಿತ ಹೂಡಿಕೆಯೊಂದಿಗೆ, ಭಾರತೀಯ ಮೂಲದ ಸುಮಾರು ಹದಿನೈದು ಉಡುಪು ಕಂಪನಿಗಳು ಜೋರ್ಡಾನ್‌ನ ಅರ್ಹ

ಕೈಗಾರಿಕಾ ವಲಯಗಳಲ್ಲಿ ಕಾರ್ಯನಿರ್ವಹಿಸುತ್ತವೆ. ಈ ಕಂಪನಿಗಳು ಜೋರ್ಡಾನ್‌ನ ವ್ಯಾಪಕವಾದ ಮುಕ್ತ ವ್ಯಾಪಾರ ಒಪ್ಪಂದಗಳು ಹಾಗೂ ಅಮೆರಿಕ, ಯುರೋಪ್ ಮತ್ತು ವಿಶಾಲ ಅರಬ್ ಪ್ರದೇಶದೊಂದಿಗೆ ವಿಶೇಷ ವ್ಯಾಪಾರ ವ್ಯವಸ್ಥೆಗಳಿಂದ ಪ್ರಯೋಜನ ಪಡೆಯುತ್ತವೆ, ಜಾಗತಿಕ ಮಾರುಕಟ್ಟೆಗಳಿಗೆ ಸಿದ್ಧಪಡಿಸಿದ ಉತ್ಪನ್ನಗಳನ್ನು ರಫ್ತು ಮಾಡುತ್ತವೆ.

<><><>

ಮತಗಳ್ಳತನ ಆರೋಪಿಸಿ ರಾಷ್ಟ್ರ ರಾಜಧಾನಿ ದೆಹಲಿಯ ರಾಮ್ ಲೀಲ ಮೈದಾನದಲ್ಲಿ ಇಂದು ಕೇಂದ್ರ ಸರ್ಕಾರದ ವಿರುದ್ಧ ಕಾಂಗ್ರೆಸ್ ಬೃಹತ್ ಪ್ರತಿಭಟನೆ ಕೈಗೊಂಡಿತು. ರಾಹುಲ್ ಗಾಂಧಿ ನೇತೃತ್ವದಲ್ಲಿ ನಡೆದ ಈ ಪ್ರತಿಭಟನೆಯಲ್ಲಿ ಚುನಾವಣಾ ಆಯೋಗ ಹಾಗೂ ಕೇಂದ್ರ ಸರ್ಕಾರದ ವಿರುದ್ಧ ಘೋಷಣೆ ಕೂಗಲಾಯಿತು. ಈ ಸಂದರ್ಭದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ, ಸಂಸದೆ ಪ್ರಿಯಾಂಕಾ ಗಾಂಧಿ, ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಸೇರಿದಂತೆ ವಿವಿಧ ರಾಜ್ಯಗಳ ಪ್ರಮುಖ ಕಾಂಗ್ರೆಸ್ ನಾಯಕರೂ ಉಪಸ್ಥಿತರಿದ್ದು, ಮತಗಳ್ಳತನ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

<><><>

ಏಳು ಬಾರಿ ಸಂಸದರಾಗಿರುವ ಕೇಂದ್ರ ಹಣಕಾಸು ರಾಜ್ಯ ಸಚಿವ ಪಂಕಜ್ ಚೌಧರಿ ಅವರನ್ನು ಬಿಜೆಪಿಯ ಉತ್ತರ ಪ್ರದೇಶ ಘಟಕದ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಗಿದೆ ಎಂದು ಕೇಂದ್ರ ಸಚಿವ ಮತ್ತು ಬಿಜೆಪಿ ಚುನಾವಣಾ ಉಸ್ತುವಾರಿ ಪಿಯೂಷ್ ಗೋಯಲ್ ಇಂದು ಲಕ್ನೋದಲ್ಲಿ ಅಧಿಕೃತವಾಗಿ ಘೋಷಣೆ ಮಾಡಿದರು.

ಧ್ವನಿ : ಪಿಯೂಷ್ ಗೋಯಲ್ (೩೦ ಸೆಕೆಂಡ್‌ಗಳು)

ನಿರ್ಗಮಿತ ರಾಜ್ಯ ಅಧ್ಯಕ್ಷ ಚೌಧರಿ ಭೂಪೇಂದ್ರ ಅವರು ಅಧಿಕಾರ ವರ್ಗಾವಣೆಯ ಸಂಕೇತವಾಗಿ ಪಂಕಜ್ ಚೌಧರಿ ಅವರಿಗೆ ಬಿಜೆಪಿ ಧ್ವಜವನ್ನು ಹಸ್ತಾಂತರಿಸಿದರು. ಹಿರಿಯ ನಾಯಕರಾದ ರಾಜನಾಥ್ ಸಿಂಗ್, ಯೋಗಿ ಆದಿತ್ಯನಾಥ್, ಬ್ರಜೇಶ್ ಪಾಠಕ್, ಕೇಶವ್ ಪ್ರಸಾದ್ ಮೌರ್ಯ, ಭೂಪೇಂದ್ರ ಚೌಧರಿ, ಸ್ಮೃತಿ ಇರಾನಿ, ಸೂರ್ಯ ಪ್ರತಾಪ್ ಶಾಹಿ, ಸ್ವತಂತ್ರ ದೇವ್ ಸಿಂಗ್ ಮತ್ತು ರಮಾಪತಿ ರಾಮ್ ತ್ರಿಪಾಠಿ ಸೇರಿದಂತೆ ಒಟ್ಟು ೧೨೦ ಹೊಸ ಸದಸ್ಯರನ್ನು ಆಯ್ಕೆ ಮಾಡಲಾಯಿತು. ಪಕ್ಷದ ರಾಷ್ಟ್ರೀಯ ಅಧ್ಯಕ್ಷರ ಆಯ್ಕೆಯಲ್ಲಿ ರಾಷ್ಟ್ರೀಯ ಪರಿಷತ್ ಸದಸ್ಯರು ಪ್ರಮುಖ ಪಾತ್ರ ವಹಿಸುತ್ತಾರೆ.

<><><>

ಉತ್ತರ ಪ್ರದೇಶದ ರಾಜ್ಯ ಬಿಜೆಪಿ ಅಧ್ಯಕ್ಷರಾಗಿ ಆಯ್ಕೆಯಾದ ಪಂಕಜ್ ಚೌಧರಿ ಅವರಿಗೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಇಂದು ಶುಭಾಶಯ ಕೋರಿದ್ದಾರೆ. ಚೌಧರಿ ಅವರ ದೀರ್ಘ ರಾಜಕೀಯ ಅನುಭವ ಮತ್ತು ಕಾರ್ಯ ದಕ್ಷತೆಯು ಉತ್ತರ ಪ್ರದೇಶದಲ್ಲಿ ಪಕ್ಷವನ್ನು ಬಲಪಡಿಸುವಲ್ಲಿ ಸಹಾಯಕವಾಗಲಿದೆ. ಏಳು ಬಾರಿ ಸಂಸತ್ ಸದಸ್ಯರಾಗಿದ್ದ ಅವರು, ಪಕ್ಷಕ್ಕಾಗಿ ಸಲ್ಲಿಸಿದ ಸಮರ್ಪಣೆ ಮತ್ತು ಶಿಸ್ತಿನ ಕಾರ್ಯಕ್ಕಾಗಿ ಸಚಿವ ರಾಜನಾಥ್ ಸಿಂಗ್ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಶ್ಲಾಘಿಸಿದ್ದಾರೆ.

<><><>

ಕೇಂದ್ರ ಈಶಾನ್ಯ ಪ್ರದೇಶ ಅಭಿವೃದ್ಧಿ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಅವರು ಇಂಗ್ಲಿಷ್ ದಿನಪತ್ರಿಕೆಯಲ್ಲಿ ಬರೆದ ಲೇಖನವನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ಇಂದು ಸಾಮಾಜಿಕ ಮಾಧ್ಯಮದಲ್ಲಿ ಹಂಚಿಕೊಂಡಿದ್ದಾರೆ.

ಲೇಖನವು ನಾಗಾಲ್ಯಾಂಡ್‌ನ ಹಾರ್ನ್‌ಬಿಲ್ ಉತ್ಸವವನ್ನು ಮಾನವಶಕ್ತಿಯ ವೈವಿಧ್ಯಮಯ ಪ್ರತಿಬಿಂಬವಾಗಿ ಹಾಗೂ ಪುರಾತನ ಮತ್ತು ಸಮಕಾಲೀನ ಅಂಶಗಳ ಅದ್ಭುತ ಸಂಗಮವಾಗಿ ವಿವರಿಸಿದೆ. ಈಶಾನ್ಯ ಭಾರತ ಪ್ರದೇಶವು ಬೆಳಗಿದಾಗ ಮಾತ್ರವೇ ದೇಶವು ಮುಂದುವರೆಯುತ್ತದೆ ಎಂದು ಪ್ರಧಾನಿ ತಿಳಿಸಿದ್ದಾರೆ. ಈ ಕುರಿತಂತೆ ಜ್ಯೋತಿರಾದಿತ್ಯ ಸಿಂಧಿಯಾ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ದೃಷ್ಟಿಕೋನವು ಅಭಿವೃದ್ಧಿ ಪ್ರಯಾಣದಲ್ಲಿ ಈಶಾನ್ಯ ಭಾರತ ಪ್ರದೇಶವನ್ನು ಮುಂಚೂಣಿಗೆ ತಂದಿದೆ ಎಂದು ಪ್ರತಿಕ್ರಿಯಿಸಿದ್ದಾರೆ.

<><><>

ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಇಂದು ನವದೆಹಲಿಯಲ್ಲಿ ಚಕ್ರವರ್ತಿ ೨ನೇ ಪೆರುಂಬಿಡುಗು ಮುತ್ತರೈಯರ್ ಸುವರನ್ ಮಾರನ್ ರವರ ಸ್ಮರಣಾರ್ಥ ಅಂಚೆಚೀಟಿ ಬಿಡುಗಡೆ ಮಾಡಿದ್ದಾರೆ. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಕೇಂದ್ರ ಸರ್ಕಾರವು ನಿರಂತರವಾಗಿ ತಮಿಳು ಭಾಷೆ ಸಂಸ್ಕೃತಿ ಮತ್ತು ಪರಂಪರೆಗೆ ಕೊಡುಗೆ ನೀಡುತ್ತಿದ್ದು, ಕಾಶಿ ತಮಿಳ್ ಸಂಗಮಂ ನಂತಹ ಹಲವಾರು ಕಾರ್ಯಕ್ರಮಗಳನ್ನು ನಡೆಸುತ್ತಿದೆ. ಜೊತೆಗೆ ತಮಿಳು ರಾಜರು, ನಾಯಕರು, ಸ್ವಾತಂತ್ರ್ಯ ಹೋರಾಟಗಾರರನ್ನು ಗುರುತಿಸಿ ಗೌರವಿಸುವ ಕೆಲಸ ಮಾಡುತ್ತಿದೆ ಎಂದರು.

<><><>

ಭಾರತ ಮತ್ತು ದಕ್ಷಿಣ ಆಫ್ರಿಕಾ ನಡುವಿನ ಮೂರನೇ ಟಿ-೨೦ ಕ್ರಿಕೆಟ್ ಪಂದ್ಯ ಹಿಮಾಚಲ ಪ್ರದೇಶದ ಧರ್ಮಶಾಲಾದಲ್ಲಿ ಪಂದ್ಯ ಪ್ರಗತಿಯಲ್ಲಿದೆ. ದಕ್ಷಿಣ ಆಫ್ರಿಕಾ ವಿರುದ್ಧ ಟಾಸ್ ಗೆದ್ದು ಭಾರತ ಫೀಲ್ಡಿಂಗ್ ಆಯ್ದುಕೊಂಡಿದೆ. ಇತ್ತೀಚಿನ ವರದಿ ಬಂದಾಗ ದಕ್ಷಿಣ ಆಫ್ರಿಕಾ ೫.೩ ಓವರ್‌ಗಳಲ್ಲಿ ೩ ವಿಕೆಟ್ ನಷ್ಟಕ್ಕೆ ೧೯ ರನ್ ಗಳಿಸಿ ಆಡುತ್ತಿದೆ.

<><><>

ಸ್ಕ್ವ್ಯಾಷ್ ವಿಶ್ವಕಪ್ ೨೦೨೫ ರಲ್ಲಿ ಭಾರತ ಮತ್ತು ಹಾಂಗ್‌ಕಾಂಗ್ ನಡುವಿನ ಫೈನಲ್ ಪಂದ್ಯದಲ್ಲಿ ಭಾರತ ಹಾಂಗ್‌ಕಾಂಗ್ ಅನ್ನು ಸೋಲಿಸಿ ಮೊದಲ ಬಾರಿಗೆ ಸ್ಕ್ವ್ಯಾಷ್ ಗೆದ್ದಿದೆ. ಚೆನ್ನೈನ ಎಕ್ಸ್‌ಪ್ರೆಸ್ ಅವೆನ್ಯೂ ಮಾಲ್‌ನಲ್ಲಿ ಇಂದು ಸಂಜೆ ನಡೆದ ಫೈನಲ್ ಪಂದ್ಯದಲ್ಲಿ ಆತಿಥೇಯ ಹಾಂಗ್‌ಕಾಂಗ್ ಅನ್ನು ೩-೦ ಅಂತರದಿಂದ ಸೋಲಿಸಿ ಭಾರತ ಜಯಶಾಲಿಯಾಗಿದೆ. ನಿನ್ನೆ ಸಂಜೆ ನಡೆದ ಸೆಮಿಫೈನಲ್‌ನಲ್ಲಿ ಹಾಲಿ ಚಾಂಪಿಯನ್ ಈಜಿಪ್ಟ್ ಅನ್ನು ೩-೦ ಅಂತರದಿಂದ ಸೋಲಿಸುವ ಮೂಲಕ ಭಾರತ ಫೈನಲ್‌ಗೆ ಲಗ್ಗೆ ಇಟ್ಟಿತು. ಇನ್ನೊಂದು ಸೆಮಿಫೈನಲ್‌ನಲ್ಲಿ, ಅಗ್ರ ಶ್ರೇಯಾಂಕದ ಹಾಂಗ್‌ಕಾಂಗ್ ಜಪಾನ್ ವಿರುದ್ಧ ಡ್ರಾ ಮಾಡಿಕೊಂಡು ೨-೦ ಅಂತರದಿಂದ ಫೈನಲ್ ಪ್ರವೇಶಿಸಿದೆ.

<><><>

ತೆಲಂಗಾಣ ಮತ್ತು ಕರ್ನಾಟಕದ ಒಳನಾಡಿನಲ್ಲಿ ನಾಳೆ ಶೀತಗಾಳಿಯ ವಾತಾವರಣವಿರಲಿದೆ. ಮುಂದಿನ ನಾಲ್ಕು ದಿನಗಳವರೆಗೆ ನಾಗಾಲ್ಯಾಂಡ್, ಮಣಿಪುರ, ಮಿಜೋರಾಂ ಮತ್ತು ತ್ರಿಪುರದಲ್ಲಿ ದಟ್ಟವಾದ ಮಂಜಿನ ವಾತಾವರಣ ಇರಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಅಸ್ಸಾಂ, ಮೇಘಾಲಯ, ಪಶ್ಚಿಮ ಉತ್ತರ ಪ್ರದೇಶ, ಪಂಜಾಬ್, ಹರಿಯಾಣ, ಚಂಡೀಗಢ ಮತ್ತು ದೆಹಲಿಯಲ್ಲಿ ಮುಂದಿನ ಎರಡು ದಿನಗಳವರೆಗೆ ಇದೇ ರೀತಿಯ ವಾತಾವರಣ ಇರಲಿದೆ.

<>< > ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>